ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	660
ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್.ಎಂ ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	22.02.2022
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಸಾಂಕ್ರಾಮಿಕ ರೋಗಗಳಿಂದ ತಾಯಿ ಮತ್ತು ಮಕ್ಕಳ ಮರಣ ಪ್ರಮಾಣದ ಅನುಪಾತ ಎಷ್ಟು; (ವಿವರ ನೀಡುವುದು)	**UNICEF** ವರದಿಯನ್ವಯ, ಸಾಂಕ್ರಾಮಿಕ ರೋಗಗಳಿಂದ ಸಂಭವಿಸಿರುವ ತಾಯಿ ಮರಣ ಪ್ರಮಾಣ ಶೇ.1.9 ಹಾಗೂ ಮಕ್ಕಳ ಮರಣ ಪ್ರಮಾಣ ಶೇ.29ರಷ್ಟು ಆಗಿರುತ್ತದೆ.
ಆ	ಸಾರ್ವಜನಿಕರಿಗೆ ಹರಡುವಂತಹ ಸಾಂಕ್ರಾಮಿಕ ರೋಗಗಳ ನಿಯಂತ್ರಣದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)	ಸಾರ್ವಜನಿಕರಿಗೆ ಹರಡುವಂತಹ ಸಾಂಕ್ರಾಮಿಕ ರೋಗಗಳ ನಿಯಂತ್ರಣದ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳ ಕುರಿತ ವಿವರವನ್ನು **ಅನುಬಂಧ**ದಲ್ಲಿ ನೀಡಲಾಗಿದೆ.
ಇ	ಪ್ರಸ್ತುತ ಇಲಾಖೆಯಲ್ಲಿರುವಂತಹ ರೋಗ ನಿಯಂತ್ರಣ ಮತ್ತು ವೈದ್ಯಕೀಯ ಸವಲತ್ತುಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಕೈಗೊಂಡ ಕ್ರಮವೇನು ? (ವಿವರ ನೀಡುವುದು)	➢ ಪ್ರಸ್ತುತ ಇಲಾಖೆಯಲ್ಲಿರುವಂತಹ ರೋಗ ನಿಯಂತ್ರಣ ಮತ್ತು ವೈದ್ಯಕೀಯ ಸವಲತ್ತುಗಳ ಬಗ್ಗೆ ಸಾರ್ವಜನಿಕರಿಗೆ ರೇಡಿಯೋ ಜಿಂಗಲ್ಸ್, ದೂರದರ್ಶನದ ಮುಖಾಂತರ ಮಾಹಿತಿ ನೀಡಲಾಗುತ್ತಿದೆ. ➢ ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಹೆಚ್ಚು ಜನಸಂದಣಿಯಿರುವ ಪ್ರದೇಶಗಳಲ್ಲಿ ಎಲೆಕ್ಟ್ರಾನಿಕ್ ಮಾಧ್ಯಮಗಳ ಮುಖಾಂತರ ಜಾಗೃತಿ ಮೂಡಿಸಲಾಗುತ್ತಿದೆ. ➢ ಸಾರ್ವಜನಿಕರು ಪಡೆಯಬಹುದಾದಂತಹ ಸೌಲಭ್ಯ/ಚಿಕಿತ್ಸೆಗಳ ಬಗ್ಗೆ 14410 ಆಪ್ತ ಮಿತ್ರ ಸಹಾಯವಾಣಿ ಮುಖಾಂತರ ಮಾಹಿತಿ ನೀಡಲಾಗುತ್ತಿದೆ. ➢ ಕ್ಷಿಪ್ರ ಪ್ರತಿಕ್ರಿಯಾ ತಂಡ (Rapid Response Team) ಅನ್ನು ತುರ್ತು ಅವಶ್ಯವಿರುವ ಸ್ಥಳಕ್ಕೆ ಕಳುಹಿಸಿ, ಸ್ಥಳದಲ್ಲಿಯೇ ತಾತ್ಕಾಲಿಕ ಚಿಕಿತ್ಸಾ ಕೇಂದ್ರವನ್ನು ಪ್ರಾರಂಭಿಸಿ, ರೋಗವು ಸಂಪೂರ್ಣವಾಗಿ ನಿಯಂತ್ರಣಕ್ಕೆ ಬರುವವರೆಗೂ, ದಿನದ 24 ಗಂಟೆಯೂ ನಿಗಾವಣೆ ಮತ್ತು ವೈದ್ಯಕೀಯ ಸೇವಾ ಸೌಲಭ್ಯಗಳನ್ನು ನೀಡುವ ಕ್ರಮ ಕೈಗೊಳ್ಳಲಾಗಿದೆ.. ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ.

ಆಕುಕ 40 ಎಸ್‌ಎಂಎಂ 2022

(ಡಾ||ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

ಅನುಬಂಧ

ಸಾಂಕ್ರಾಮಿಕ ರೋಗಗಳಾದ ಕಾಲರಾ, ಕರುಳುಬೇನೆ, ವಾಂತಿ ಬೇಧಿ, ಅತಿಸಾರ ಬೇಧಿ, ಕಾಮಾಲೆ ಮತ್ತು ಹೆಚ್1ಎನ್1 ನಂತಹ ರೋಗಗಳನ್ನು ನಿಯಂತ್ರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.:-

1. ಎಲ್ಲಾ ಕುಡಿಯುವ ನೀರಿನ ಮೂಲಗಳಿಂದ ವಿಶೇಷವಾಗಿ ಗ್ರಾಮಾಂತರ ಪ್ರದೇಶದಲ್ಲಿ ನೀರಿನ ಮಾದರಿಗಳನ್ನು ಸಂಗ್ರಹಿಸಿ, ಪರೀಕ್ಷಿಸಿ, ಕಲುಷಿತವಾಗಿರುವ ಮೂಲಗಳನ್ನು ತಕ್ಷಣ ಕ್ಲೋರಿನೇಷನ್ ಮಾಡಿಸಲಾಗುತ್ತಿದೆ. ರೋಗಿಗಳಿಗೆ ವಿತರಿಸಲು ಓ.ಆರ್.ಎಸ್. ಪೊಟ್ಟಣಗಳು ಆರೋಗ್ಯ ಕೇಂದ್ರಗಳಲ್ಲಿ, ಆರೋಗ್ಯ ಕಾರ್ಯಕರ್ತರಲ್ಲಿ ಮತ್ತು ಆಶಾ ಕಾರ್ಯಕರ್ತರಲ್ಲಿ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿರುವಂತೆ ಕ್ರಮವಹಿಸಲಾಗಿದೆ.

2. ವೈಯಕ್ತಿಕ ಸ್ವಚ್ಛತೆ, ಶುದ್ಧಕುಡಿಯುವ ನೀರಿನ ಹಾಗೂ ಆಹಾರದ ಸಂರಕ್ಷಣೆ, ಪರಿಸರ ನೈರ್ಮಲ್ಯದ ನಿರ್ವಹಣೆ ಬಗ್ಗೆ ಹಾಗೂ ರಸ್ತೆ/ಬೀದಿ ಬದಿಗಳಲ್ಲಿ ಮಾರುವ ಕತ್ತರಿಸಿದ ಹಣ್ಣು ಮತ್ತು ತೆರೆದಿಟ್ಟ ಆಹಾರ ಪದಾರ್ಥಗಳನ್ನು ಸೇವಿಸಬಾರದೆಂದು ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣಾಧಿಕಾರಿಗಳು ಆರೋಗ್ಯ ಶಿಕ್ಷಣ ನೀಡುತ್ತಿದ್ದಾರೆ.

3. ಸ್ಥಳೀಯ ಆಹಾರ ಸುರಕ್ಷತಾ ಅಧಿಕಾರಿಗಳು, ಹೋಟೆಲ್ ಮತ್ತು ಅಂಗಡಿಗಳ ತಪಾಸಣೆ ನಡೆಸಿ ಆಹಾರ ಮತ್ತು ನೀರಿನ ಗುಣಮಟ್ಟದ ಸುರಕ್ಷತೆ ಖಾತ್ರಿ ಪಡಿಸಿಕೊಳ್ಳುವ ಹಾಗೂ ತುರ್ತು ಸಂದರ್ಭಗಳಲ್ಲಿ ಬಿಸಿ ನೀರು ಸರಬರಾಜು ಮಾಡಲು ಹೋಟೆಲ್ ಮಾಲೀಕರಿಗೆ ಕಟ್ಟು ನಿಟ್ಟಿನ ಸೂಚನೆ ನೀಡುತ್ತಿದ್ದಾರೆ.

4. ಸಾಂಕ್ರಾಮಿಕ ರೋಗದ ಕಾರಣ (ಕಲುಷಿತ ಕುಡಿಯುವ ನೀರು/ಆಹಾರ)ವನ್ನು ಗುರ್ತಿಸಿ, ಪರ್ಯಾಯ ವ್ಯವಸ್ಥೆಯಲ್ಲಿ ಸುರಕ್ಷಿತ ನೀರನ್ನು ಪೂರೈಸಲು ಹಾಗೂ ಸೋರುವಿಕೆಗಳನ್ನು ತಕ್ಷಣ ದುರಸ್ತಿ ಪಡಿಸಲು ಸ್ಥಳೀಯ ಸಂಸ್ಥೆಗಳು ಕ್ರಮವಹಿಸಿದ್ದಾರೆ.

5. ತುರ್ತು ಸಂಧರ್ಭಗಳಲ್ಲಿ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರುಗಳೊಂದಿಗೆ ಚರ್ಚಿಸಿ, ಸಂಬಂದಿಸಿದ ಅಧಿಕಾರಿಗಳ ಸಭೆಯನ್ನು ಕರೆದು ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುತ್ತಿದೆ.

6. ಸೂಕ್ತ ಚಿಕಿತ್ಸೆಗಾಗಿ ಅಗತ್ಯವಾದ ಜೀವರಕ್ಷಕ ಔಷಧಿಗಳು ಹಾಗೂ ಕ್ರಿಮಿ-ಕೀಟನಾಶಕಗಳನ್ನು ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಲಭ್ಯವಿರುವಂತೆ ಕ್ರಮ ಕೈಗೊಳ್ಳುವುದು. ಹೆಚ್ಚಿನ ಅವಶ್ಯಕತೆಯಿದ್ದಲ್ಲಿ ಔಷಧಗಳನ್ನು ಕರ್ನಾಟಕ ರಾಜ್ಯ ಡ್ರಗ್ಸ್ ಅಂಡ್ ಲಾಜಿಸ್ಟಿಕ್ ವೇರ್ ಹೌಸ್ ಸೊಸೈಟಿ (ಕೆ.ಡಿ.ಎಲ್.ಡಬ್ಲ್ಯೂ.ಎಸ್) ಇವರಿಂದ ಪಡೆಯಲಾಗುತ್ತಿದೆ.

7. ಜಿಲ್ಲೆ. ತಾಲ್ಲೂಕು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ -ಈ ಮೂರು ಹಂತಗಳಲ್ಲಿ ಕ್ಷಿಪ್ರ ಕಾರ್ಯ ಪಡೆಯ (Rapid Response Team) ಮೂಲಕ ಶೀಘ್ರವಾಗಿ "ಪರಿಹಾರ ಕೇಂದ್ರ" ಗಳನ್ನು ತೆರೆದು ರೋಗ ಉಲ್ಬಣ ಪರಿಸ್ಥಿತಿಯನ್ನು ನಿಭಾಯಿಸಲಾಗುತ್ತಿದೆ.

8. ಗಂಭೀರ ಸ್ವರೂಪದ ರೋಗಿಗಳನ್ನು ಅಂಬುಲೆನ್ಸ್ ಮೂಲಕ ಹತ್ತಿರದ ತಾಲ್ಲೂಕು/ಜಿಲ್ಲಾ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಸಾಗಿಸುವ ವ್ಯವಸ್ಥೆ ಬಲಪಡಿಸಲಾಗುತ್ತಿದ್ದು, 108 ಅಂಬುಲೆನ್ಸ್ ಸೇವೆ ನೀಡಲಾಗುತ್ತಿದೆ.

9. ಜನ ಪ್ರತಿನಿಧಿಗಳ ಹಾಗೂ ಸಮುದಾಯದ ಮುಖ್ಯಸ್ಥರ ಸಭೆಗಳಲ್ಲಿ, ಆರೋಗ್ಯ ಇಲಾಖೆಯಲ್ಲಿ ಲಭ್ಯವಿರುವ ಎಲ್ಲಾ ಸವಲತ್ತುಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ.

10. ಹೆಚ್1ಎನ್1 ಮತ್ತು ಕೋವಿಡ್-19 ನಂತಹ ಪ್ರಕರಣಗಳು ವರದಿಯಾದ ಮನೆ ಮತ್ತು ಅಕ್ಕ ಪಕ್ಕದ ಮನೆಗಳಲ್ಲಿ ಕ್ಷೇತ್ರಮಟ್ಟದಲ್ಲಿ/ವಾರ್ಡ್‌ಗಳಲ್ಲಿ ಆರೋಗ್ಯ ಕಾರ್ಯಕರ್ತರುಗಳಿಂದ ಸಮೀಕ್ಷೆ ನಡೆಸಿ ಆರೋಗ್ಯ ಶಿಕ್ಷಣವನ್ನು ನೀಡುವುದು. ಸಂಶಯಾಸ್ಪದ 'ಸಿ' ವರ್ಗದ ಪ್ರಕರಣಗಳಿದ್ದಲ್ಲಿ ಗಂಟಲಿನ ಮಾದರಿ (ಸ್ವಾಬ್) ಗಳನ್ನು ಕೂಡಲೇ ಪರೀಕ್ಷೆಗೆ ಒಳಪಡಿಸಿ, ಫಲಿತಾಂಶ ಪಡೆದು ಸೂಕ್ತ ಚಿಕಿತ್ಸೆ ನೀಡುವ ಕಾರ್ಯ ಚಾಲ್ತಿಯಲ್ಲಿದೆ.

11. ರಾಜ್ಯ ಮಟ್ಟ, ಜಿಲ್ಲಾ ಮಟ್ಟ ಮತ್ತು ತಾಲ್ಲೂಕು ಮಟ್ಟದ ಕ್ಷಿಪ್ರ ಕಾರ್ಯಾಚರಣೆ ತಂಡ (Rapid Response Team)ಗಳನ್ನು ರಚಿಸಲಾಗಿದ್ದು ತುರ್ತು ಸಂದರ್ಭಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾರೆ.

12. ಹೆಚ್1 ಎನ್1 ರೋಗಲಕ್ಷಣಗಳು ಪತ್ತೆಯಾದ ನಿಕಟವರ್ತಿಗಳು ಹಾಗೂ ಖಾಯಿಲೆ ಇರುವವರಿಗೆ ಭಾರತ ಸರ್ಕಾರದ ಮಾರ್ಗಸೂಚಿಯಂತೆ 'ಬಿ' ಮತ್ತು 'ಸಿ' ವರ್ಗದ ರೋಗಿಗಳಿಗೆ ತಕ್ಷಣ ಟಾಮಿಫ್ಲೂ ಮಾತ್ರೆ ಸೇರಿದಂತೆ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದ್ದು, 'ಎ' ವರ್ಗೀಕರಣದಲ್ಲಿರುವ ರೋಗಿಗಳನ್ನು ಅನುಸರಣೆ ಮಾಡಲಾಗುತ್ತಿದೆ.

13. ಟಾಮಿಫ್ಲೂ ಮಾತ್ರೆಗಳನ್ನು ಸಾಕಷ್ಟು ಪ್ರಮಾಣದಲ್ಲಿ ಎಲ್ಲಾ ಆರೋಗ್ಯ ಸಂಸ್ಥೆ/ಆಸ್ಪತ್ರೆಗಳಲ್ಲಿ ದಾಸ್ತಾನು ಇಡುವುದು. ಹೆಚ್1ಎನ್1 ಚಿಕಿತ್ಸೆಗೆ ಬೇಕಾದ ಔಷಧಿಗಳ ಕೊರತೆಯಿದ್ದಲ್ಲಿ 'ರಾಷ್ಟ್ರೀಯ ಆರೋಗ್ಯ ಅಭಿಯಾನದ ಉಚಿತ ಔಷಧಿ ವಿತರಣೆ' ಕಾರ್ಯಕ್ರಮದ ಅಡಿಯಲ್ಲಿ ಅವಶ್ಯಕತೆಗೆ ಅನುಗುಣವಾಗಿ ಔಷಧಿಗಳನ್ನು ಖರೀದಿಸಿ ಸಮರ್ಪಕವಾಗಿ ರೋಗ ನಿರ್ವಹಣೆ ಮಾಡಲು ಸೂಕ್ತ ನಿರ್ದೇಶನ ನೀಡಲಾಗಿದೆ. ಅದರಂತೆ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಔಷಧಗಳು ಲಭ್ಯವಿರುತ್ತವೆ.

14. ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ವರ್ಗ 'ಬಿ" ಮತ್ತು 'ಸಿ' ವರ್ಗದ ಹೆಚ್೧ಎನ್೧ ಸೋಂಕಿನವರನ್ನು ಗುರುತಿಸಿ ಅವರ ವಿಳಾಸ, ದೂರವಾಣಿ ಸಂಖ್ಯೆ ಇತ್ಯಾದಿ ವಿವರಗಳನ್ನು ರಾಜ್ಯದ ಸಹಾಯವಾಣಿ ಕೇಂದ್ರದ ಸಂಖ್ಯೆ:104 ಇವರಿಗೆ ಪ್ರತಿ ದಿನ ನೀಡುವಂತೆ ಯೋಜನಾ ನಿರ್ದೇಶಕರು, ಐಡಿಎಸ್‌ಪಿ ಇವರಿಂದ ಸುತ್ತೋಲೆ ಹೊರಡಿಸಲಾಗಿದೆ.

15. ಸಾರ್ವಜನಿಕರಿಗೆ ಹೆಚ್1ಎನ್1 ಮತ್ತು ಕೋವಿಡ್-19 ನಂತಹ ಸೋಂಕಿನ ಬಗ್ಗೆ ಮಾಹಿತಿ ನೀಡಲು, ಆಕಾಶವಾಣಿ ಮತ್ತು ದೂರದರ್ಶನದಲ್ಲಿ ಪ್ರಚುರ ಪಡಿಸಲಾಗಿದೆ. ಜನಸಂದಣಿ ಇರುವ ರೈಲ್ವೆ ಮತ್ತು ಬಸ್ ನಿಲ್ದಾಣಗಳಲ್ಲಿ ಎಲೆಕ್ಟ್ರಾನಿಕ್ ಮಾಧ್ಯಮಗಳ ಮುಖಾಂತರ ಮಾಹಿತಿ ಮತ್ತು ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.